Bruhat Bengaluru Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ನೋಡೆಲ್ ಅಧಿಕಾರಿಗಳು/ಸಹಾಯಕ ಅಭಿಯಂತರರ ಕಛೇರಿ ನಾಗಪುರ ಉಪವಿಭಾಗ, ಬಿ.ಬಿ.ಎಂ.ಪಿ,
12ನೇ ಮುಖ್ಯರಸ್ತೆ, 11ನೇ ಕ್ರಾಸ್, ನಾಗಪುರ, ಬಿಬಿಎಂಪಿ ಕಛೇರಿ ಸಂಕೀರ್ಣ ಕಟ್ಟಡ, ಮಹಾಲಕ್ಷ್ಮೀಲೇಔಟ್,ಬೆಂಗಳೂರು-86.

## ದಿನಾಂಕ:-06-08-2022 ರಂದು ನಡೆದ ವಾರ್ಡ್ ಸಂಖ್ಯೆ:67ರ ಹಾಗು ಹೊಸ ವಾರ್ಡ್ ಸಂಖ್ಯೆ:51ರ ವಾರ್ಡ್ ಸಮಿತಿ ಸಭೆಯ ನಡವಳಿ

ಉಲ್ಲೇಖ:- (1) ಸಮಿತಿ ಸಭೆ ಸೂಚಿ ಪತ್ರ ಸಂಖ್ಯೆ:ಬಿ12(5)/ಪಿಆರ್/35/2020-21 ದಿನಾಂಕ:21:09:2020
(2)ಸಭೆ ಸೂಚನಾ ಪತ್ರ ಸಂ. ಸ.ಅ./ವಾ-67/ಪಿ.ಆರ್/47/2022-23 ದಿನಾಂಕ:03-08-2022

| ಕ್ರ.ಸ. | ಶ್ರೀಯುತರ ಹೆಸರು | ಹುದ್ದೆ |
|---|---|---|
| 1. | ಶ್ರೀ. ಪಿ. ವಿಶ್ವನಾಥ್ | ಮುಖ್ಯ ಅಭಿಯಂತರರು (ದಾಸರಹಳ್ಳಿ ವಲಯ), ಬಿಬಿಎಂಪಿ, ನೋಡೆಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ ಸಂಖ್ಯೆ:67. |
| 2. | ಶ್ರೀ. ಬಿ. ಸಿ ರವಿಕುಮಾರ್ | ಸಹಾಯಕ ಅಭಿಯಂತರು ವಾರ್ಡ್-67 ಹಾಗು ಸಮಿತಿ ಕಾರ್ಯದರ್ಶಿಗಳು. |
| 3. | ಶ್ರೀ. ಉದಯ ಶಂಕರ್ | 1ನೇ 'ಆರ್'ಬ್ಲಾಕ್ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು. |
| 4. | ಶ್ರೀ. ರಂಗರಾಜು | ವಾರ್ಡ್‌ನ ನಾಗರೀಕರು. |
| 5. | ಶ್ರೀ. ರಾಮಾನಾಥ್ | ವಾರ್ಡ್‌ನ ನಾಗರೀಕರು. |
| 6. | ಶ್ರೀ. ಗಂಗಯ್ಯ | ಹಿರಿಯ ಆರೋಗ್ಯ ಪರೀವಿಕ್ಷಕರು, ವಾರ್ಡ್-67. |
| 7. | ಶ್ರೀ. ಕೆ.ವಿ ಲೋಕೇಶ್ | ಪಶು ಕೆಲಸ ವಿಭಾಗ |
| 8. | ಶ್ರೀ. ಗಿರೀಶ್. ಬಿ | ಬೆಂ.ಜ.ಮಂ ಜಲ ಪರೀವಿಕ್ಷಕರು ಎನ್ ಡಬ್ಲ್ಯೂ-1. |
| 9. | ಶ್ರೀ. ಆನಂದ್ ಮೂರ್ತಿ | ಸಹಾಯಕ ಅಭಿಯಂತರರು, ಬೆಸ್ಕಂ ಎನ್-1 ಉಪವಿಭಾಗ |
| 10. | ಶ್ರೀ. ಮಂಜುನಾಥ್ | ತೋಟಗಾರಿಕೆ ಇಲಾಖೆ, ಮೇಸ್ತ್ರೀ |
| 11. | ಶ್ರೀ. ಶ್ರೀನಿವಾಸ್ ಎನ್ | ಬೆಂ.ಜ.ಮಂ ಜಲ ಪರೀವಿಕ್ಷಕರು ಎನ್ ಡಬ್ಲ್ಯೂ-2. |
| 12. | ಶ್ರೀ. ಶಿವಣ್ಣ | ಪೋಲೀಸ್ ಸಬ್‌ಇನ್ಸ್‌ಪೆಕ್ಟರ್, ರಾಜಾಜಿನಗರ ಸಂಚಾರಿ ಪೋಲೀಸ್ ಠಾಣೆ. |
| 13. | ಸುಬ್ರಮಣ್ಯನಗರ ಪೋಲೀಸ್ ಠಾಣೆ. | ಗೈರು ಹಾಜರಿ. |
| 14. | ಮಲ್ಲೇಶ್ವರಂ ಸಂಚಾರಿ ಪೋಲೀಸ್ ಠಾಣೆ. | ಗೈರು ಹಾಜರಿ. |
| 15. | ಮಹಾಲಕ್ಷ್ಮೀಲೇಔಟ್ ಪೋಲೀಸ್ ಠಾಣೆ. | ಗೈರು ಹಾಜರಿ. |
| 16. | ಸಹಾಯಕ ಅಭಿಯಂತರರು, ಬೆಸ್ಕಂ ಎನ್-7 ಉಪವಿಭಾಗ | ಗೈರು ಹಾಜರಿ. |

ಪು.ತಿ.ನೋ.



Scanned by CamScanner

| | | |
|---|---|---|
| 17. | ಸಹಾಯಕ ಅಭಿಯಂತರರು, ಬೋರ್‌ವೆಲ್ ನಿರ್ವಹಣೆ | ಗೈರು ಹಾಜರಿ. |
| 18. | ಕಂದಾಯ ಪರೀವಿಕ್ಷಕರು, ವಾರ್ಡ್–67 | ಗೈರು ಹಾಜರಿ. |
| 19. | ಕಿರಿಯ ಆರೋಗ್ಯ ಪರೀವಿಕ್ಷಕರು, ವಾರ್ಡ್–67 | ಗೈರು ಹಾಜರಿ. |

ವಾರ್ಡ್ ಸಮಿತಿ ಸಭೆಯ ಕಾರ್ಯದರ್ಶಿಗಳು ಮಾತನಾಡಿ ಆಗಸ್ಟ್ ಮಾಹೆಯ ದಿ: 06/08/2022 ರಂದು ಬೆಳಿಗ್ಗೆ 9.30 ಘಂಟೆಗೆ ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಅಭಿವೃದ್ಧಿ ಹಾಗೂ ಕುಂದುಕೊರತೆಗಳ ಬಗ್ಗೆ ಚರ್ಚಿಸಲು ಕರೆದಿರುವ ಸಭೆಗೆ ಆಗಮಿಸಿರುವ ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು, ಮತ್ತು ಸಮಿತಿ ಸದಸ್ಯರಿಗೆ ಸ್ವಾಗತ ಕೋರಿದರು. ಹಾಗೂ ವಾರ್ಡ್ ಸಂಖ್ಯೆ:67ರ ವಾಸ್ತವದ ಬಗ್ಗೆ ಕಿರು ಪರಿಚಯವನ್ನು ಮಂಡಿಸಿದರು.

ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು, ಮಾತನಾಡಿ ಸಮಿತಿಯ ಸದಸ್ಯರು ಮತ್ತು ಸ್ಥಳೀಯ ಸಾರ್ವಜನಿಕರು ತಮ್ಮ ತಮ್ಮ ಅವಹಾಲುಗಳನ್ನು ತಿಳಿಸಬೇಕೆಂದು ತಿಳಿಸಿದ ಹಿನ್ನೆಲೆಯಲ್ಲಿ ಸಮಿತಿಯ ಸದಸ್ಯರು ಈ ಕೆಳಕಂಡಂತೆ ವಾರ್ಡ್‌ನಲ್ಲಿ ಕಂಡುಬಂದಿರುವ ಸಮಸ್ಯೆಗಳನ್ನು ಸಭೆಗೆ ಮಂಡಿಸಿದರು.

## <u>ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:</u>

| | |
|---|---|
| ಶ್ರೀ. ಆನಂದ್ ಮೂರ್ತಿ<br>ಸಹಾಯಕ ಅಭಿಯಂತರರು, ಬೆಸ್ಕಂ ಎನ್–1 ಉಪವಿಭಾಗ | ವಾರ್ಡ್‌ನ ಅನನ್ಯ ಆಸ್ಪತ್ರೆ ಎದುರು ರಸ್ತೆಯಲ್ಲಿ ಬೆಸ್ಕಂ ಕೇಬಲ್ ಬಹಳ ಹಳೆಯದಾಗಿದ್ದು ಯಾವಾಗಲು ಲೈನ್ ಟ್ರಬಲ್ ಆಗುತ್ತಿರುತ್ತದೆ ಸದರಿ ರಸ್ತೆಯ ಹಾಗು ಅಕ್ಕ ಪಕ್ಕದ ಮನೆಗಳಲ್ಲಿ ವಿದ್ಯುತ್ ವ್ಯತ್ಯಯ ವಾಗುತ್ತಿರುತ್ತದೆ ಆದ್ದರಿಂದ ತುರ್ತಾಗಿ ಹೊಸ ಕೇಬಲ್ ಅಳವಡಿಸುವುದು ಅವಶ್ಯಕವಿರುತ್ತದೆ, ಕೇಬಲ್ ಅನ್ನು ಎಚ್.ಡಿ.ಡಿ ಮಾದರಿಯಲ್ಲಿ ಅಳವಡಿಸಲಾಗುವುದು ಆದ್ದರಿಂದ ಇದು ತುರ್ತು ಕೆಲಸವಾಗಿರುವುದರಿಂದ ಸದರಿ ರಸ್ತೆಯಲ್ಲಿ ರಸ್ತೆ ಅಗೆಯಲು ಅವಕಾಶ ಕಲ್ಪಸಲು ಸಭೆಯಲ್ಲಿ ಕೋರಿದರು. |
| ಶ್ರೀ. ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಸಹಾಯಕ ಅಭಿಯಂತರರು, ಬೆಸ್ಕಂ ರವರು ತಿಳಿಸಿರುವಂತೆ ಅನನ್ಯ ಆಸ್ಪತ್ರೆ ಎದುರು ರಸ್ತೆಯಲ್ಲಿ ಬಹಳ ಸಲ ವಿದ್ಯುತ್ ವ್ಯತ್ಯಯವಾಗುತ್ತಿರುತ್ತದೆ, ಈಗಾಗಲೇ ವಾರ್ಡ್ ಸಮಿತಿ ಸಭೆಯಲ್ಲಿ ಹಾಗು ವಾಟ್ಸ್ ಆಪ್ ಗುಂಪಿನಲ್ಲಿ ದೂರುಗಳನ್ನು ನೀಡಿರುತ್ತಾರೆ, ಆದ್ದರಿಂದ ತುರ್ತಾ ಕೆಲಸ ವಾಗಿರುವುದರಿಂದ ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗದವರಿಗೆ ಪತ್ರದ ಮೂಲಕ ತಿಳಿಸಿ ಸಮಸ್ಯೆ ಬಗೆಹರಿಸಲು ಸಭೆಯಲ್ಲಿ ತಿಳಿಸಿದರು. |
| ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರರು,ವಾರ್ಡ–67 | ವಾರ್ಡ್‌ನ ಆಭರಣ ಜ್ಯೂವೆಲರಿಸ್ ಹತ್ತಿರ, 1ನೇ ಮುಖ್ಯರಸ್ತೆ, ಮಹಾಲಕ್ಷ್ಮೀಪುರಂ ರಲ್ಲಿ ಬೃಹತ್ ನೀರುಗಾಲುವೆರವರು ಚರಂಡಿ ಪರೀಶಿಲನೆಗಾಗಿ ಬೃಹತ್ ನೀರುಗಾಲುವೆ ಚರಂಡಿಯ ಮೇಲಿನ ಚಪ್ಪಡಿ ಕಲ್ಲುಗಳನ್ನು ತೆಗೆದಿರುತ್ತಾರೆ ಆದರೆ ಇದುವರೆವಿಗೂ ಚರಂಡಿಯ ಮೇಲಿನ ಚಪ್ಪಡಿ ಕಲ್ಲುಗಳನ್ನು ಮುಚ್ಚಿರುವುದಿಲ್ಲ, ಆ ರಸ್ತೆಯಲ್ಲಿ ಬಹಳ ಪಾದಚಾರಿಗಳು ಓಡಾಡುವುದರಿಂದ ಬೃಹತ್ ನೀರುಗಾಲುವೆ ಚರಂಡಿಯಲ್ಲಿ ಬೀಳುವ ಸಾಧ್ಯತೆ ಇರುತ್ತದೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ಶಿವಣ್ಣ<br>ಪೋಲಿಸ್ ಸಬ್‌ಇನ್ಸ್‌ಪೆಕ್ಟರ್, ರಾಜಾಜಿನಗರ ಸಂಚಾರಿ ಪೋಲೀಸ್ ಠಾಣೆ. | ವಾರ್ಡ್‌ನ ಮಹಾಲಕ್ಷ್ಮೀಪುರಂ ಅಯ್ಯಪ್ಪ ದೇವಾಲಯದ ಎದುರು ಬೃಹತ್ ನೀರುಗಾಲುವೆರವರು ನೂತನವಾಗಿ ಚರಂಡಿ ನಿರ್ಮಾಣ ಮಾಡಿದರು ಆದರೆ ಅದರ ಎರಡು ಭಾಗದ ಕೋನೆಯಲ್ಲಿ ಸರಿಯಾಗಿ ಚಪ್ಪಡಿ ಕಲ್ಲುಗಳನ್ನು ಮುಚ್ಚಿರುವುದಿಲ್ಲ ಹಾಗು ವಾರ್ಡ್‌ನ ವಿದ್ಯಾ ಭಾರತಿ ಶಾಲೆಯ ಎದುರು ಕೂಡ ಕೆಲಸ ಪೂರ್ಣಗೊಂಡಿರುವುದಿಲ್ಲ ಇದರಿಂದ ಶಾಲಾ ಮಕ್ಕಳು ಚರಂಡಿಯಲ್ಲಿ ಬೀಳುವ ಸಂಭವವಿರುತ್ತದೆ, ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಸಹಾಯಕ ಅಭಿಯಂತರರು, ಕಾಮಗಾರಿ ಹಾಗು ಪೋಲಿಸ್ ಸಬ್‌ಇನ್ಸ್‌ಪೆಕ್ಟರ್, ರಾಜಾಜಿನಗರ ಸಂಚಾರಿ ಪೋಲೀಸ್ ಠಾಣೆ ರವರ ದೂರಿನಂತೆ ಬೃಹತ್ ನೀರುಗಾಲುವೆ ಚರಂಡಿಯ ಮೇಲಿನ ಚಪ್ಪಡಿ ಕಲ್ಲುಗಳನ್ನು ತುರ್ತಾಗಿ ಮುಚ್ಚುವುದು, ಇಲ್ಲವಾದ್ದಲ್ಲಿ ಸ್ಥಳದಲ್ಲಿ ಪಾದಚಾರಿಗಳು ಓಡಾಡದಿರಲು ಮುಂಜಾಗ್ರತ ಕ್ರಮ ವಹಿಸಲು ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ರವರಿಗೆ ದೂರವಾಣಿ ಮೂಖೇನ ತಿಳಿಸಿದರು. |



ಪು.ತಿ.ನೋ.

Scanned by CamScanner

| | |
|---|---|
| ಶ್ರೀ. ರಾಮಾನಾಥ್<br>ವಾರ್ಡ್‌ನ ನಾಗರೀಕರು. | ವಾರ್ಡ್‌ನ ರಾಜಾಜಿನಗರ 1ನೇ ಬ್ಲಾಕ್‌ನ 8ನೇ ಅಡ್ಡರಸ್ತೆಯಲ್ಲಿ ಮರಗಳ ಟ್ರೀಮಿಂಗ್ ಮಾಡಬೇಕು ಎಂದು ಸಭೆಯಲ್ಲಿ ತಿಳಿಸಿದರು. |
| ಶ್ರೀ. ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ರಾಜಾಜಿನಗರ 1ನೇ ಬ್ಲಾಕ್‌ನ ನಾಗರೀಕರ ದೂರಿನಂತೆ 8ನೇ ಅಡ್ಡರಸ್ತೆಯ ಮರಗಳ ಟ್ರೀಮಿಂಗ್ ಮಾಡಲು ಅರಣ್ಯ ಇಲಾಖೆಯ ರೇಂಜ್ ಆಫೀಸರ್‌ಗೆ, ದೂರವಾಣಿ ಮೂಲಕ ಸಭೆಯಲ್ಲಿ ತಿಳಿಸಿದರು. |
| ಶ್ರೀ. ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ಕಳೆದ 1 ವಾರದಿಂದ ಮಳೆ ವಿಪರೀತವಾಗಿ ಸೂರಿಯುತ್ತಿರುವುದರಿಂದ ತಗೆದುಕೊಂಡಿರುವ ಮುಂಜಾಗ್ರತ ಕ್ರಮದ ಬಗ್ಗೆ ವರದಿ ನೀಡುವಂತೆ ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ಪರೀವಿಕ್ಷಕರಿಗೆ ತಿಳಿಸಲು ಸೂಚಿಸಿದರು. |
| ಶ್ರೀ. ಗಂಗಯ್ಯ<br>ಹಿರಿಯ ಆರೋಗ್ಯ ಪರೀವಿಕ್ಷಕರು,<br>ವಾರ್ಡ್–67 | ವಾರ್ಡ್‌ನ ಹಿರಿಯ ಆರೋಗ್ಯ ಪರೀವಿಕ್ಷಕರು ಮಾತನಾಡುತ್ತ ಇತ್ತಿಚ್ಚಿಗೆ ವಿಪರೀತ ಮಳೆ ಸುರಿಯುತ್ತಿದ್ದು ಡೇಂಗ್ಯೂ ಕೇಸಸ್‌ಗಳು ಜಾಸ್ತಿಯಾಗುತ್ತಿವೆ, ಆದ್ದರಿಂದ ಸಾರ್ವಜನಿಕರು ಒಡಾಡುವ ಸ್ಥಳಗಳಲ್ಲಿ ಅಂದರೆ ಬಸ್ ನಿಲ್ದಾಣ, ಆಟೋ ನಿಲ್ದಾಣ, ಉದ್ಯಾನಗಳ ಸೂತ್ತಮುತ್ತಲು ಫಾಗಿಂಗ್ ಮಾಡಲಾಗುತ್ತಿದೆ, ಹಾಗು ಮನೆ , ಅಂಗಡಿ ಮುಂಗಟ್ಟುಗಳ ಮೇಲ್‌ಛಾವಣಿಯ ಮೇಲೆ ಸೂತ್ತಮೂತ್ತಲು ಎಲ್ಲೂ ಮಳೆ ನೀರು ನಿಲ್ಲದಂತೆ ನೋಡಿಕೊಳ್ಳಲು ಸಾರ್ವಜನಿಕರಿಗೆ ಸರಿವು ಮೂಡಿಸಲಾಗುತ್ತಿದೆ ಎಂದು ಸಭೆಯಲ್ಲಿ ತಿಳಿಸಿದರು. |
| ಶ್ರೀ. ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು ಹಾಗು<br>ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರರು, ವಾರ್ಡ–67 | ಕಳೆದ 1 ವಾರದಿಂದ ಮಳೆ ವಿಪರೀತವಾಗಿ ಸೂರಿಯುತ್ತಿರುವುದರಿಂದ ಮ್ಯಾನ್ ಹೋಲ್‌ಗಳು ತುಂಬಿ ಹುಕ್ಕುತ್ತಿರುತ್ತದೆ ಆದ್ದರಿಂದ ಬೆಂಗಳೂರು ಒಳ ಚರಂಡಿ ಮಂಡಳಿರವರು ಮನೆಯ ಮಾಲೀಕರಿಗೆ ಪ್ರತಿ ಮನೆಗಳಲ್ಲಿ ಇಂಗು ಗುಂಡಿ ನಿರ್ಮಾಣ ಮಾಡಿ ಮಳೆ ನೀರನ್ನು ಒಳಚರಂಡಿಗೆ ಬಿಡದೆ ಇಂಗು ಗುಂಡಿಯಲ್ಲಿ ನೀರು ಈರುವಂತೆ ಮಾಡಲು ಸೂಚಿಸಬೇಕು ಎಂದು ಸಭೆಯಲ್ಲಿ ತಿಳಿಸಿದರು. |
| ಶ್ರೀ. ಗಿರೀಶ್. ಬಿ<br>ಬೆಂ.ಜ.ಮಂ ಜಲ ಪರೀವಿಕ್ಷಕರು ಎನ್ ಡಬ್ಲ್ಯೂ–1. | ವಾರ್ಡ್‌ನ ನೋಡೆಲ್ ಅಧಿಕಾರಿಗಳು ಹಾಗು ಸಹಾಯಕ ಅಭಿಯಂತರರು ಸೂಚಿಸಿರುವಂತೆ, ಈಗಾಗಲೆ ಪ್ರತಿ ನೂತನ ಮನೆ ನಿರ್ಮಾಣ ಸಮಯದಲ್ಲಿ ಇಂಗು ಗುಂಡಿ ನಿರ್ಮಾಣ ಮಾಡಿ ಮಳೆ ನೀರನ್ನು ಸದರಿ ಗುಂಡಿಗೆ ಬಿಡಲು ಸೂಚಿಸಲಾಗುತ್ತಿದೆ, ಹಾಗು ಮಳೆ ನೀರನ್ನು ಒಳಚರಂಡಿಗೆ ಹರಿಯುವಂತೆ ಬಿಟ್ಟಿರುವ ಮನೆಯ ಮಾಲೀಕರ ವಿರುದ್ದ ಕ್ರಮ ತೆಗೆದುಕೊಳ್ಳಲಾಗುತ್ತಿದೆ ಎಂದು ಸಭೆಯಲ್ಲಿ ಮಾಹಿತಿ ಒದಗಿಸಿದರು. |
| ಶ್ರೀ. ರಂಗರಾಜು<br>ವಾರ್ಡ್‌ನ ನಾಗರೀಕರು. | ವಾರ್ಡ್‌ನ ಎನ್.ಪಿ.ಎಸ್ ಶಾಲೆಯ ಹತ್ತಿರ ಬೀದಿ ದೀಪವಿರುವುದಿಲ್ಲ ಪಾದಚಾರಿಗಳು ಹಾಗು ವಾಹನ ಸವಾರರು ರಾತ್ರಿ ವೇಳೆ ಸಂಚರಿಸುವುದು ಬಹಳ ತೊಂದರೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ.ಮಂಜುನಾಥ್,<br>ಬೀದಿ ದೀಪ ನಿರ್ವಹಣೆ ಗುತ್ತಿಗೆದಾರರು | ವಾರ್ಡ್‌ನ ಎನ್.ಪಿ.ಎಸ್ ಶಾಲೆಯ ಹತ್ತಿರ ಬೀದಿ ದೀಪ ಕಂಭದಲ್ಲಿ Fittings ಇರುವುದಿಲ್ಲ Fittings ಬಂದ ಕೂಡಲೇ ಬೀದಿ ದೀಪ ಅಳವಡಿಸಲಾಗುವುದಾಗಿ ಸಭೆಯಲ್ಲಿ ತಿಳಿಸಿದರು. |
| ಶ್ರೀ. ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ನಾಗರೀಕರ ದೂರಿನಂತೆ ಎನ್.ಪಿ.ಎಸ್ ಶಾಲೆಯ ಹತ್ತಿರ ಬೀದಿ ದೀಪ ಕಂಭದಲ್ಲಿ Fittings ಇಲ್ಲದಿರುವುದರಿಂದ ಕಾರ್ಯಪಾಲಕ ಅಭಿಯಂತರರು, ಬೀದಿ ದೀಪ ನಿರ್ವಹಣೆಯವರು ಕ್ರಮವಹಿಸಿ ಎಂದಿನಂತೆ ಬೀದಿ ದೀಪ ಬೆಳಗುವಂತೆ ಕ್ರಮ ವಹಿಸಲು ಸೂಚಿಸಿದರು. |
| ಶ್ರೀ. ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ಏಕ ಬಳಕೆ ಪ್ಲಾಸ್ಟಿಕ್ ನಿಷೇಧಿಸಿರುವ ಬಗ್ಗೆ ತಗೆದುಕೊಂಡಿರುವ ಕ್ರಮದ ಬಗ್ಗೆ ವರದಿ ನೀಡುವಂತೆ ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ಪರೀವಿಕ್ಷಕರಿಗೆ ತಿಳಿಸಲು ಸೂಚಿಸಿದರು. |



ಪು.ತಿ.ನೋ.

Scanned by CamScanner

| | |
|---|---|
| ಶ್ರೀ. ಗಂಗಯ್ಯ<br>ಹಿರಿಯ ಆರೋಗ್ಯ ಪರೀವಿಕ್ಷಕರು,<br>ವಾರ್ಡ್–67 | ವಾರ್ಡ್‌ನ ಹಿರಿಯ ಆರೋಗ್ಯ ಪರೀವಿಕ್ಷಕರು ಮಾತನಾಡುತ್ತ ವಾರ್ಡ್‌ನಲ್ಲಿ ಏಕ ಬಳಕೆ ಪ್ಲಾಸ್ಟಿಕ್ ಬಳಕೆ ಮಾಡುವವರಿಗೆ ದಂಡ ಹಾಕಲಾಗುತ್ತಿದೆ ಹಾಗು ಅಂಗಡಿ ಮಾಲೀಕರಿಗೆ ಏಕ ಬಳಕೆ ಪ್ಲಾಸ್ಟಿಕ್ ನೀಡದಿರಲು ಸೂಚಿಸಲಾಗುತ್ತಿದೆ ಎಂದು ಸಭೆಯಲ್ಲಿ ತಿಳಿಸಿದರು. |
| ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರು ವಾರ್ಡ–67 | ವಾರ್ಡ್‌ನಲ್ಲಿ ಸಾರ್ವಜನಿಕರು ಮನೆಯ ಡೆಬ್ರೀಸ್‌ಅನ್ನು ರಸ್ತೆಯ ಮೇಲೆ ಹಾಕಿ ತೆರವುಗೊಳಿಸುತ್ತಿರುವುದಿಲ್ಲ, ಮಳೆಗಾಲ ಶುರುವಾಗುತ್ತಿರುವುದರಿಂದ ಡೆಬ್ರೀಸ್ ರಸ್ತೆಯ ಪಕ್ಕದಲ್ಲಿರುವ ಚರಂಡಿಗೆ ಹೋಗಿ ಸದರಿ ಚರಂಡಿ ಬ್ಲಾಕ್ ಆಗುವ ಸಧ್ಯತೆಯಿರುತ್ತದೆ ಇದರಿಂದ ಸಾರ್ವಜನಿಕರು ಡೆಬ್ರೀಸ್ ಹಾಕಿ ತೆರವುಗೊಳಿಸದ ಮನೆಯ ಮಾಲೀಕರಿಗೆ ಮಾರ್ಷಲ್ ದಂಡ ಹಾಕಲು ಸಭೆಯಲ್ಲಿ ಸೂಚಿಸಿದರು. |
| ಶ್ರೀ. ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ವಾರ್ಡ್‌ನ ಸಹಾಯಕ ಅಭಿಯಂತರರ ದೂರಿನಂತೆ ವಾರ್ಡ್ ಮಾರ್ಷಲ್ ಕ್ರಮವಹಿಸಲು ಸೂಚಿಸಿದರು. |
| ಶ್ರೀ. ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು | ಘನತ್ಯಾಜ್ಯ ನಿರ್ವಹಣೆ ನಿಯಮ 2016ರ ಪ್ರಕಾರ ಕಸವನ್ನು ಮೂಲದಲ್ಲಿಯೇ ವಿಂಗಡಿಸಬೇಕು ಪ್ರತಿ ಮನೆಯಲ್ಲಿಯೂ 3 (ಹಸಿರು, ನೀಲಿ, ಕೆಂಪು) ರೀತಿಯ ಕಸದ ಬುಟ್ಟಿಗಳನ್ನು ಇಟ್ಟಿರಬೇಕು.<br>**ಹಸಿರು ಬುಟ್ಟಿಯಲ್ಲಿ:** ಸೊಪ್ಪು, ತರಕಾರಿ, ಹಣ್ಣುಗಳು ಮತ್ತು ಅಡುಗೆ ವೇಸ್ಟ್ (ಗೊಬ್ಬರ ಮಾಡಬಹುದಾದ ವಸ್ತುಗಳು)<br>**ನೀಲಿ ಬುಟ್ಟಿಯಲ್ಲಿ:** ಕಾಗದಗಳು, ಪ್ಲಾಸ್ಟಿಕ್‌ಗಳು, ಗಾಜುಗಳು, ಎಲೆಕ್ಟ್ರಾನಿಕ್ ವಸ್ತುಗಳು ಹಾಗು ಇತ್ಯಾದಿ. (ಮರುಬಳಕೆ ಮಾಡಬಹುದಾದ ವಸ್ತುಗಳು)<br>**ಕೆಂಪು ಬುಟ್ಟಿಯಲ್ಲಿ:** ಡೈಪರ್‌ಗಳು, ಬ್ಲೇಡುಗಳು,ಪ್ಯಾಡ್‌ಗಳು, ರಾಸಾಯನಿಕ ವಸ್ತುಗಳು,ಮತ್ತು ಇತ್ಯಾದಿ (ಅಪಾಯಕಾರಿ ತ್ಯಾಜ್ಯಗಳು )<br>ಕಸವನ್ನು ಎಲ್ಲೆಂದರಲ್ಲಿ ಬಿಸಾಡಬಾರದು, ಆಟೋಚಾಲಕರು ಮತ್ತು ಸಹಾಯಕರು ಮನೆ ಬಾಗಲಿಗೆ ಬಂದಾಗ ಕಸವನ್ನು ಬೇರ್ಪಡಿಸಿ ನೀಡಬೇಕು, ಪ್ಲಾಸ್ಟಿಕ್‌ನ್ನು ಪೂರ್ಣ ಪ್ರಮಾಣದಲ್ಲಿ ಬಳಸಬಾರದು. ಇದು ಆರೋಗ್ಯಕ್ಕೆ ಹಾನಿಕರಾಕ, ಹಸಿಕಸವನ್ನು ಮನೆಯ ಅಂಗಳದಲ್ಲಿಯೇ ಕಾಂಪೋಸ್ಟಿಂಗ್ ಮಾಡಿ ಗಿಡಗಳಿಗೆ ಹಾಕಬೇಕು ಎಂದು ಸಭೆಯಲ್ಲಿ ತಿಳಿಸಿದರು. |
| ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರು ವಾರ್ಡ–67 | ವಾರ್ಡ್‌ನ 1ನೇ ಮೈನ್ ನಾಗಪುರದಲ್ಲಿ ಬೆಂಗಳೂರು ಜಲಮಂಡಳಿರವರು ರಸ್ತೆ ಅಗೆದು ಇದುವರೆವಿಗು ರಸ್ತೆಯನ್ನು ದುರಸ್ಥಿ ಮಾಡದೇ ಹಾಗೆಯೆ ಬಿಟ್ಟಿರುತ್ತಾರೆ ಕೂಡಲೇ ಸರಿಪಡಿಸಬೇಕು ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ಶ್ರೀ. ಗಿರೀಶ್. ಬಿ<br>ಬೆಂ.ಜ.ಮಂ ಜಲ ಪರೀವಿಕ್ಷಕರು ಎನ್ ಡಬ್ಲ್ಯೂ–1. | ವಾರ್ಡ್‌ನ ಸಹಾಯಕ ಅಭಿಯಂತರರ ದೂರಿಗೆ ಸಂಭಂದಿಸಿದಂತೆ 1ನೇ ಮೈನ್‌ನಲ್ಲಿ ವೆಟ್ ಮಿಕ್ಸ್ ಹಾಕಿ ರಸ್ತೆ ಗುಂಡಿಯನ್ನು ದುರಸ್ಥಿಗೊಳಿಸಲಾಗುವುದಾಗಿ ಸಭೆಯಲ್ಲಿ ತಿಳಿಸಿದರು. |
| ಶ್ರೀ. ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು. | ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಕೂಡಲೇ ರಸ್ತೆ ಗುಂಡಿಯನ್ನು ಮುಚ್ಚಿ 3 ದಿನಗಳೊಳಗೆ ವರದಿ ನೀಡಲು ತಿಳಿಸಿದರು. |
| ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರು ವಾರ್ಡ–67 | ವಾರ್ಡ್‌ನ ಮಾನ್ಯ ನೋಡೆಲ್ ಅಧಿಕಾರಿಗಳು ಸೂಚಿಸಿರುವಂತೆ ಕ್ರಮವಹಿಸಲಾಗುವುದಾಗಿ ಸಭೆಯಲ್ಲಿ ತಿಳಿಸಿದರು. |
| ಶ್ರೀ. ವಿಶ್ವನಾಥ್<br>ನೋಡೆಲ್ ಅಧಿಕಾರಿಗಳು. | 75ನೇ ಸ್ವಾತಂತ್ರ್ಯ ಅಮೃತ ಮಹೋತ್ಸವದ ಅಂಗವಾಗಿ "ಹರ್ ಘರ್ ತಿರಂಗಾ" ಅಭಿಯಾನವನ್ನು ಆಗಸ್ಟ್ 13 ರಿಂದ 15 ರವರೆಗೆ ಹಮ್ಮಿಕೊಳ್ಳುವಂತೆ ಹಾಗೂ ಈ ದಿನಗಳಂದು ರಾಜ್ಯದಲ್ಲಿರುವಂತೆ ಎಲ್ಲಾ ಮನೆಗಳ, ಸರ್ಕಾರಿ ಕಚೇರಿಗಳ ಕಟ್ಟಡಗಳು, ಸರ್ಕಾರೇತರ ಸಂಘ ಸಂಸ್ಥೆಗಳ ಕಟ್ಟಡಗಳು ಹಾಗು ಇತರೆ ಎಲ್ಲಾ ಕಟ್ಟಡಗಳ ಮೇಲೆ ಧ್ವಜವನ್ನು ಹಾರಿಸಲು ಕ್ರಮವಹಿಸುವಂತೆ ಸೂಚಿಸಿದರು. |



ವಿಶ್ವನಾಥ್.ಬಿ



Scanned by CamScanner

| | |
|---|---|
| ಶ್ರೀ. ವಿಶ್ವನಾಥ್ ನೋಡಲ್ ಅಧಿಕಾರಿಗಳು. | 19ನೇ ಮುಖ್ಯರಸ್ತೆಯಲ್ಲಿರುವ ಆಕಾಶ್ ಟ್ಯುಟೋರಿಯಲ್ ಸಂಸ್ಥೆಯವರು ಯಾವುದೇ ಪಾರ್ಕಿಂಗ್ ವ್ಯವಸ್ಥೆ ಮಾಡಿರುವುದಿಲ್ಲ, ಇದರಿಂದ ಮಕ್ಕಳನ್ನು ಟ್ಯುಟೋರಿಯಲ್‌ಗೆ ಬಿಡಲು ಬಂದಾಗ ಮತ್ತು ಕರೆದುಕೊಂಡು ಹೋಗುವಾಗ ರಸ್ತೆಯ ಎರಡು ಬದಿಯಲ್ಲಿ ಪೋಷಕರು ನಿಂತಿರುತ್ತಾರೆ ಇದರಿಂದ ವಾಹನ ದಟ್ಟನೆ ಹೆಚ್ಚಾಗಿ ರಸ್ತೆ ಉದ್ದಕ್ಕು ವಾಹನ ದಟ್ಟನೆ ಉಂಟಾಗುತ್ತಿರುತ್ತದೆ ಆದ್ದರಿಂದ ಮಲ್ಲೇಶ್ವರಂ ಸಂಚಾರಿ ಠಾಣೆಯ ಇನ್ಸ್‌ಪೆಕ್ಟರ್‌ರವರು ವಾಹನ ದಟ್ಟನೆ ಆಗದಂತೆ ಬದಲಿ ವ್ಯವಸ್ಥೆ ಮಾಡಿ ಸೂಕ್ತ ಕ್ರಮವಹಿಸಲು ಸೂಚಿಸಿದರು. |

ವಾರ್ಡ್ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಭಾನಡವಳಿಗಳಿಗೆ ಅನುಸಾರವಾಗಿ ತಮ್ಮ ಇಲಾಖೆಗೆ ಸಂಬಂಧಿಸಿದ ವಿಷಯಗಳನ್ನು ಪಟ್ಟಿ ಮಾಡಿಕೊಂಡು ಸದರಿ ದೂರುಗಳನ್ನು ಸರಿಪಡಿಸಿರುವ ಬಗ್ಗೆ ಅಥವಾ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ದೃಢೀಕೃತ ಮಾಹಿತಿಗಳನ್ನು ತಪ್ಪದೇ ವಾರ್ಡ್ ಕಮಿಟಿ ವಾರ್ಡ್-67 ವಾಟ್ಸ್ ಆಪ್ ಗ್ರೂಪ್ ನಲ್ಲಿ ಮತ್ತು ಪ್ರತಿ ವಾರ್ಡ್ ಸಮಿತಿ ಸಭೆಯಲ್ಲಿ ವರದಿ ಮಾಡಲು ಸೂಚಿಸುತ್ತಾ, ಸಭೆಯನ್ನು ಮುಕ್ತಾಯಗೊಳಿಸಲಾಯಿತು. ಸಭೆಯ ಕೊನೆಯಲ್ಲಿ ಸಮಿತಿ ಕಾರ್ಯದರ್ಶಿ ರವರು ಸಮಿತಿ ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು.

ಪ್ರತಿಯನ್ನು

1. ಮಾನ್ಯ ವಲಯ ಉಪಆಯುಕ್ತರು (ಆಡಳಿತ), ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ಕೇಂದ್ರ ರವರ ಅವಗಾಹನ ಸಲ್ಲಿಸಿದೆ.
6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8. ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ಪಶ್ಚಿಮ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16. ಕಛೇರಿಯ ಕಡತಕ್ಕೆ.

ಕಾರ್ಯದರ್ಶಿ ಹಾಗೂ
ಸಹಾಯಕ ಅಭಿಯಂತರರು, ವಾರ್ಡ್- 67
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು ಹಾಗೂ
ನೋಡಲ್ ಅಧಿಕಾರಿಗಳು ವಾರ್ಡ್- 67
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ



Scanned by CamScanner